# ಮತ್ತೆ ಮಹಾ ಪ್ರವಾಹ ಭೀತಿ: ನೆರವಿಗೆ ಬಂತು ಸೇನೆ!

## ಭೀಮೆಗೆ 8 ಲಕ್ಷ, ಕೃಷ್ಣಾ ನದಿಗೆ 2 ಲಕ್ಷ ಕ್ಯುಸೆಕ್ ಭಾರೀ ಒಳಹರಿವು
## ಕಲ್ಬುರ್ಗಿ, ಯಾದಗಿರಿ, ವಿಜಯಪುರ ಜತೆ ರಾಯಚೂರಿಗೂ ಆತಂಕ
## ಸಾವಿರಾರು ಜನ ಸ್ಥಳಾಂತರ | ರಕ್ಷಣೆಗೆ ಅರೆ ಸೇನಾಪಡೆ ಆಗಮನ

18/10/20

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮಹಾರಾಷ್ಟ್ರದ ಜಲಾಶಯಗಳಿಂದ ಭೀಮೆಗೆ 8 ಲಕ್ಷ ಕ್ಯುಸೆಕ್ ನೀರು ಹರಿದು ಬರುತ್ತಿರುವುದು ಮತ್ತು ಕೃಷ್ಣಾ ನದಿಗೂ ಭಾರೀ ಪ್ರಮಾಣದಲ್ಲಿ ನೀರು ಬಿಡುತ್ತಿರುವ ಹಿನ್ನೆಲೆಯಲ್ಲಿ ಈಗಾಗಲೇ ಜಲಕಂಟಕಕ್ಕೆ ತುತ್ತಾಗಿರುವ ಕಲಬುರಗಿ, ಯಾದಗಿರಿ, ವಿಜಯಪುರ ಜಿಲ್ಲೆಗಳ ಜತೆಗೆ ನೆರೆಯ ರಾಯಚೂರಿಗೂ ಮಹಾಪ್ರವಾಹ ವ್ಯಾಪಿಸಿದೆ. ಈ ನಾಲ್ಕೂ ಜಿಲ್ಲೆಗಳಲ್ಲಿ ಮತ್ತೆ ಕಟ್ಟೆಚ್ಚರ ಘೋಷಿಸಲಾಗಿದ್ದು, ನದಿ ತೀರದ ಗ್ರಾಮಗಳ ಜನರ ಸ್ಥಳಾಂತರ ಕಾರ್ಯ ಸಮರೋಪಾದಿಯಲ್ಲಿ ನಡೆಯುತ್ತಿದೆ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಅಗ್ನಿಶಾಮಕದಳದ ಜತೆಗೆ ಇದೀಗ ಮುನ್ನೆಚ್ಚರಿಕಾ ಕ್ರಮವಾಗಿ ಶನಿವಾರ ಕಲಬುರಗಿಗೆ ಅರೆಸೇನಾಪಡೆಯ ತಂಡವೊಂದನ್ನು ಕಳುಹಿಸಿಕೊಡಲಾಗಿದೆ.

ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶದಲ್ಲಿ ಕಳೆದ ಕೆಲದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಉಜನಿ, ವೀರ ಭಟ್ಕರ್, ಜಲಾಶಯಗಳಿಂದ ಭೀಮಾ ನದಿಗೆ 8 ಲಕ್ಷ ಕ್ಯುಸೆಕ್ ನೀರು ಹರಿದು ಬರುತ್ತಿದೆ. ಅದೇ ರೀತಿ ಕೃಷ್ಣಾನದಿಗೆ 2 ಲಕ್ಷ ನೀರು ಬಿಡಲಾಗುತ್ತಿದೆ. ಭೀಮೆ ಪ್ರವಾಹಕ್ಕೆ ಈಗಾಗಲೇ ಕಲಬುರಗಿಯಲ್ಲಿ 157 ಗ್ರಾಮಗಳು ಜಲಾವೃತವಾಗಿವೆ. ↘12



ಕಲಬುರಗಿ ಜಿಲ್ಲೆ ಅಫಜಲಪುರ ತಾಲೂಕು ಜೋಸಗ ಗ್ರಾಮದಲ್ಲಿ ನೆರೆ ಸಂತ್ರಸ್ತ ಜನರ ರಕ್ಷಣೆ.

**4 ಜಿಲ್ಲೆಗಳು:** ಕಲಬುರಗಿ, ಯಾದಗಿರಿ, ವಿಜಯಪುರ, ರಾಯಚೂರಲ್ಲಿ ಪ್ರವಾಹ ತೀವ್ರ

**185 ಗ್ರಾಮ:** ಜಲಾವೃತಗೊಂಡು ಸಂಕಷ್ಟಕ್ಕೀಡಾಗಿರುವ ಗ್ರಾಮಗಳ ಅಂದಾಜು ಸಂಖ್ಯೆ

**30000 ಜನ:** 3 ಜಿಲ್ಲೆಗಳಿಂದ ಸುರಕ್ಷಿತ ಸ್ಥಳಕ್ಕೆ ಕರೆದೊಯ್ಯಲಾಗಿರುವ ಜನರ ಸಂಖ್ಯೆ

### 70 ವರ್ಷಗಳ ಭೀಕರ ನೆರೆ

ಸ್ಥಳೀಯರ ಪ್ರಕಾರ ಭೀಮೆ ಈ ರೀತಿ ರೌದ್ರಾವತಾರ ಪ್ರದರ್ಶಿಸುತ್ತಿರುವುದು 60 ವರ್ಷಗಳಲ್ಲಿ ಇದೇ ಮೊದಲು. 1958ರಲ್ಲಿ ಇದೇ ರೀತಿ ಭೀಮಾ ನದಿಯಲ್ಲಿ ಮಹಾ ಪ್ರವಾಹ ಕಾಣಿಸಿಕೊಂಡಿತ್ತು. ಅದಾದ ಬಳಿಕ ಭೀಮಾ ತೀರದ ಜನ ಅನೇಕ ಪ್ರವಾಹಗಳನ್ನು ಕಂಡಿದ್ದಾರೆಯಾದರೂ ಈ ರೀತಿಯ ಪ್ರವಾಹ ನೋಡುತ್ತಿರುವುದು ಇದೇ ಮೊದಲು ಎನ್ನುತ್ತಾರೆ ಕಲಬುರಗಿ ಜಿಲ್ಲೆಯ ಮಣ್ಣೂರಿನ ಹಿರಿಯರಾದ ಕಾಶಪ್ಪ ಮಾಸ್ತರ್ ಸಿಂದಗಿ.

### 9952 ಕೋಟಿ ನಷ್ಟ: ಸಿಎಂ

#### 10 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅಪಾರ ಬೆಳೆ ಹಾನಿ
#### ತ್ವರಿತ ಪರಿಹಾರಕ್ಕೆ ಸೂಚಿಸಿದ್ದೇನೆ: ಯಡಿಯೂರಪ್ಪ

ಮೈಸೂರು: ಪ್ರಾಕೃತಿಕ ವಿಕೋಪದಿಂದಾಗಿ ರಾಜ್ಯದಲ್ಲಿ ಆಗಸ್ಟ್, ಸೆಪ್ಟೆಂಬರ್ ತಿಂಗಳಲ್ಲೇ ಒಟ್ಟು ₹9,952 ಕೋಟಿ ನಷ್ಟ ಉಂಟಾಗಿದೆ. 10.07 ಲಕ್ಷ ಹೆಕ್ಟೇರ್ ಬೆಳೆ ನಷ್ಟ ಅಂದಾಜಿಸಲಾಗಿದೆ. ಇಷ್ಟಾದರೂ ಪ್ರಾಕೃತಿಕ ವಿಕೋಪ ಪರಿಹಾರಕ್ಕೆ ಸ್ಪಂದಿಸುವಲ್ಲಿ ಸರ್ಕಾರ ಯಶಸ್ವಿಯಾಗಿದೆ. ಉತ್ತರ ಕರ್ನಾಟಕದ ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ತ್ವರಿತ ಪರಿಹಾರಕ್ಕೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು. ↘12

# ಮತ್ತೆ ಮಹಾ ಪ್ರವಾಹ ಭೀತಿ: ನೆರವಿಗೆ ಬಂತು ಸೇನೆ!

3ನೇ ಪುಟದಿಂದ

ವಿಜಯಪುರದಲ್ಲಿ 17 ಹಾಗೂ ಯಾದಗಿರಿಯಲ್ಲೂ 10ಕ್ಕೂ ಹೆಚ್ಚು ಗ್ರಾಮಗಳಿಗೆ ನೀರು ನುಗ್ಗಿದೆ. ಈ ಮೂರೂ ಜಿಲ್ಲೆಗಳಲ್ಲಿ ಭೀಮೆ ತೀರದ 39 ಸಾವಿರಕ್ಕೂ ಹೆಚ್ಚು ಮಂದಿಯನ್ನು ಸುರಕ್ಷಿತ ಪ್ರದೇಶಕ್ಕೆ ರವಾನಿಸಲಾಗಿದ್ದು, 152 ಕಾಳಜಿ ಕೇಂದ್ರಗಳನ್ನು ಆರಂಭಿಸಲಾಗಿದೆ. ಉಕ್ಕಿಹರಿಯುತ್ತಿರುವ ಕೃಷ್ಣಾನದಿಯಿಂದಾಗಿ ರಾಯಚೂರು ಜಿಲ್ಲೆಯಲ್ಲಿ ಕೆಳಮಟ್ಟದ ಹಲವು ಸೇತುವೆಗಳು ಜಲಾವೃತವಾಗಿವೆ. ಮುನ್ನೆಚ್ಚರಿಕಾ ಕ್ರಮವಾಗಿ ನಡುಗಡ್ಡೆಯಲ್ಲಿರುವ ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗುತ್ತಿದೆ.

**3 ದಿನದಿಂದ ಲಾರಿಗಳ ಸಾಲು:** ಭೀಮೆ ಅಬ್ಬರಕ್ಕೆ ಕಲಬುರಗಿ–ಜೇವರ್ಗಿ ನಡುವಿನ ಕಟ್ಟಿ ಸಂಗಾವಿ ಸೇತುವೆ ಮುಳುಗಿದ್ದು, ಈ ರಸ್ತೆಯಲ್ಲಿ ಮೂರು ದಿನಗಳಿಂದ ಲಾರಿಗಳು ಸಾಲುಗಟ್ಟಿ ನಿಂತಿವೆ. ರಕ್ಷಣಾ ಕಾರ್ಯಕ್ಕಾಗಿ ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್‌ನ 5 ತಂಡಗಳ ಜತೆಗೆ ಈಗ 98 ಮಂದಿಯ ಅರೆಸೇನಾ ಸಿಬ್ಬಂದಿಯನ್ನೂ ಕರೆಸಿಕೊಳ್ಳಲಾಗಿದೆ. ಇದರ ಜತೆಗೆ, ಅಗ್ನಿಶಾಮಕ ದಳ, ಗೃಹ ರಕ್ಷಕ ದಳದ ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ. ಯಾದಗಿರಿಯ ಭೀಮಾ ಪಾತ್ರದ 12 ಗ್ರಾಮಗಳು ಭಾರೀ ಪ್ರವಾಹಕ್ಕೆ ತುತ್ತಾಗುವ ಆತಂಕವಿದೆ. ಈಗಾಗಲೇ ಕೆಲವೆಡೆ ನೀರು ನುಗ್ಗಿದ್ದು, 33 ಗ್ರಾಮಗಳ ರಸ್ತೆ ಸಂಪರ್ಕ ಕಡಿತಗೊಳ್ಳುವ ನಿರೀಕ್ಷೆ ಇದೆ.

# 9952 ಕೋಟಿ ನಷ್ಟ: ಸಿಎಂ

3ನೇ ಪುಟದಿಂದ

ಚಾಮುಂಡಿ ಬೆಟ್ಟದಲ್ಲಿ ಶನಿವಾರ ನಾಡಹಬ್ಬ ದಸರಾ ಮಹೋತ್ಸವ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ, ಅತಿವೃಷ್ಟಿಯಿಂದಾಗಿ ರಾಜ್ಯದಲ್ಲಿ ಮೂಲಸೌಲಭ್ಯಕ್ಕೆ ಭಾರೀ ಹಾನಿಯಾಗಿದೆ. ₹4,851 ಕೋಟಿ ಮೌಲ್ಯದಷ್ಟು ಮೂಲಸೌಲಭ್ಯ ನಷ್ಟವಾಗಿದೆ. ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಸಾಕಷ್ಟು ಅನುದಾನ ಲಭ್ಯವಿದ್ದು, ಜನರಿಂದ ದೂರು ಬಾರದಂತೆ ಪರಿಹಾರ ಕಲ್ಪಿಸಲು ಸೂಚಿಸಲಾಗಿದೆ ಎಂದರು.

ಉತ್ತರ ಕರ್ನಾಟಕದ ಜನರ ಜತೆ ಸರ್ಕಾರ ಸದಾ ಇರಲಿದೆ. ಕಲಬುರಗಿಯಲ್ಲಿ ಪ್ರವಾಹ ಪೀಡಿತ ಗ್ರಾಮಗಳನ್ನೇ ಸ್ಥಳಾಂತರಿಸಿ ಉತ್ತಮ ಪರ್ಯಾಯ ವ್ಯವಸ್ಥೆ ಒದಗಿಸಲಾಗಿದೆ. ರಾಜ್ಯದ 51,810 ರೈತರಿಗೆ ಬೆಳೆ ಪರಿಹಾರ ವಾಗಿ ಒಟ್ಟು ₹ 36.57 ಕೋಟಿಯನ್ನು ಅವರ ಖಾತೆಗೆ ಜಮೆ ಮಾಡಲಾಗಿದೆ. ಎಲ್ಲೆಡೆ ಪ್ರಾಕೃತಿಕ ವಿಕೋಪ ತಡೆ ಯೋಜನೆ ಜಾರಿಯಲ್ಲಿದ್ದು ಪರಿಹಾರ ವಿತರಣೆ ಸುಲಭವಾಗಿದೆ. ಎಂದರು.